ವೈದ್ಯರು ಹಾಗೂ ಸಿಬ್ಬಂದಿ ಕೊರತೆ

738 (1871); ಶ್ರೀ ಆನಂದ ಸಿಂಗ್ (ವಿಜಯನಗರ–ಬಳ್ಳಾರಿ)

(ಅ) ಹೊಸಪೇಟೆ ತಾಲ್ಲೂಕಿನ ವಿಜಯನಗರ ಮತಕ್ಷೇತ್ರ ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಮತ್ತು ಉಪಕೇಂದ್ರಗಳಲ್ಲಿ ವೈದ್ಯಾಧಿಕಾರಿ ಹಾಗೂ ಸಿಬ್ಬಂದಿಗಳ ಕೊರತೆ ಇರುವುದು. ಸರ್ಕಾರದ ಗಮನಕ್ಕೆ ಬಂದಿದೆಯೇ; (ಸಿಬ್ಬಂದಿ ಮಂಜೂರಾತಿ ವಿವರಗಳನ್ನು ಒದಗಿಸುವುದು)

(ಆ) ಬಂದಿದ್ದಲ್ಲಿ, ಖಾಲಿ ಇರುವ ವೈದ್ಯಾಧಿಕಾರಿಗಳ ಹಾಗೂ ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಇ) ವೈದ್ಯಾಧಿಕಾರಿ ಮತ್ತು ಅಗತ್ಯ ಸಿಬ್ಬಂದಿಗಳನ್ನು ನೇಮಕಾತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ವೈದ್ಯರು ಮತ್ತು ಸಿಬ್ಬಂದಿ ನೇಮಕಾತಿ ಆಗುವವರೆವಿಗೂ ಕೊರತೆಯನ್ನು ನೀಗಿಸಲು ತಾತ್ಕಾಲಿಕವಾಗಿ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಯು. ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

(ಅ) **ಮತ್ತು** (ಆ) ಬಂದಿದೆ. ಹೊಸಪೇಟೆ ತಾಲ್ಲೂಕಿನ ವಿಜಯನಗರ ಮತಕ್ಷೇತ್ರ ವ್ಯಾಪ್ತಿಯ 6 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು 12 ಉಪಕೇಂದ್ರಗಳು ಇರುತ್ತವೆ.

ಈ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ 6 ವೈದ್ಯಾಧಿಕಾರಿಗಳ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 2 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 4 ವೈದ್ಯರ ಹುದ್ದೆಗಳು ಖಾಲಿ ಇವೆ ಹಾಗೂ 69 ಇತರೆ ಸಿಬ್ಬಂದಿಗಳ ಹುದ್ದೆಗಳು ಮಂಜೂರಾಗಿದ್ದು, 58 ಸಿಬ್ಬಂದಿ ವರ್ಗದವರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 11 ಹುದ್ದೆಗಳು ಖಾಲಿ ಇವೆ.

(ಇ) ಭಾರತ ಸಂವಿಧಾನ ಅನುಚ್ಛೇದ 371 ಜೆ ರೀತ್ಯ ಹೈದ್ರಾಬಾದ್ ಕರ್ನಾಟಕ ಪ್ರದೇಶದ ಪ್ರಾದೇಶಿಕ ಮಟ್ಟದ ಸ್ಥಳೀಯ ವೃಂದ ಕುರಿತಂತೆ ಅಧಿಸೂಚನೆ ಹೊರಡಿಸಲಾಗಿದೆ. ಈ ಹುದ್ದೆಗಳಿಗೆ ಸಂಬಂಧ ಪಟ್ಟ ವೈದ್ಯರು ಮತ್ತು ಸಿಬ್ಬಂದಿ ವರ್ಗದವರಿಂದ ಇಚ್ಛೆ ಪತ್ರವನ್ನು ಪಡೆದು, ತದನಂತರ ಖಾಲಿ, ಹುದ್ದೆಗಳನ್ನು ಗುರುತಿಸಿ, ಅವುಗಳನ್ನು ಸ್ಥಳೀಯ ವೃಂದ ಮತ್ತು ಮೀಸಲಾತಿ ನಿಯಮಗಳನ್ವಯ ವರ್ಗೀಕರಿಸಿ, ತದನಂತರ ತಜ್ಞ ವೈದ್ಯರು ಹಾಗೂ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಹಾಗೂ ಇತರೆ ಹುದ್ದೆಗಳನ್ನು ಇಲಾಖಾ ನೇರ ನೇಮಕಾತಿ ಸಮಿತಿ ಮುಖಾಂತರ ನೇಮಕಾತಿ ಮಾಡಿಕೊಳ್ಳಲು ಮತ್ತು ಕೆಲವು ಹುದ್ದೆಗಳನ್ನು ಪದೋನ್ನತಿ ಮೂಲಕ ಭರ್ತಿ ಮಾಡಲಾಗುವುದು.

(ಈ) ಗ್ರಾಮೀಣ ಪ್ರದೇಶದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯಾಧಿಕಾರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಆಯಾಯ ಜಿಲ್ಲಾಧಿಕಾರಿಯವರಿಗೆ ಅನುಮತಿ ನೀಡಲಾಗಿದೆ. ಆಸ್ಪತ್ರೆಗಳಲ್ಲಿ ಇರುವ ವೈದ್ಯರು ಮತ್ತು ಸಿಬ್ಬಂದಿ ವರ್ಗದವರಿಂದ ರೋಗಿಗಳಿಗೆ ಯಾವುದೇ ತೊಂದರೆಯಾಗದಂತೆ ಚಿಕಿತ್ಸೆ ನೀಡಲಾಗುತ್ತಿದೆ ಹಾಗೂ ವೈದ್ಯರು ಇಲ್ಲದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಹತ್ತಿರದ ಆಸ್ಪತ್ರೆಗಳಿಂದ ವೈದ್ಯರನ್ನು ನಿಯೋಜಿಸಿ ಚಿಕಿತ್ಸೆ ನೀಡಲು ಕ್ರಮವಹಿಸಲು ಸೂಚಿಸಿದೆ.

ಹೊಸದಾಗಿ ಪಡಿತರ ಚೀಟಿ ನೀಡುವುದು:

739 (1457); ಶ್ರೀ ಅಪ್ಪಚ್ಚು ರಂಜನ್ ಎಂ. ಪಿ. (ಮಡಿಕೇರಿ)

(ಅ) ಹೊಸದಾಗಿ ಪಡಿತರ ಚೀಟಿ ಹೊಂದಿದ ನಂತರ ಹಳೆಯ ಪಡಿತರ ಚೀಟಿ ಇತ್ತೀಚೆಗೆ ರದ್ದುಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;